ಎ-72-(147)
6

ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಕೆ.ಟಿ. ಶ್ರೀಕಂಠೇಗೌಡ ಇವರು ನಿಯಮ-72ರಡಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಬಗ್ಗೆ.**

**ಪ್ರಶ್ನೆ:**

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಪ್ರಥಮ ದರ್ಜೆ ಸಹಾಯಕರು ಮತ್ತು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ಆಯ್ಕೆಯಾಗಿರುವ, ಅಭ್ಯರ್ಥಿಗಳಿಗೆ ಶೀಘ್ರವಾಗಿ ನೇಮಕಾತಿ ಆದೇಶ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯ ಬಯಸುತ್ತೇನೆ.

**ಮಾನ್ಯ ಮುಖ್ಯಮಂತ್ರಿಗಳ ಉತ್ತರ:**

ರಾಜ್ಯದಲ್ಲಿ ಕೋವಿಡ್-19 ನಿಂದ ಉಂಟಾದ ಪರಿಸ್ಥಿತಿಯನ್ನು ನಿಭಾಯಿಸಿ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸಲು 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ: 06.07.2020ರಲ್ಲಿ ತಡೆಹಿಡಿಯಲಾಗಿತ್ತು.

ಇಲಾಖೆಗಳು ಸಲ್ಲಿಸಿದ್ದ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020 (ಭಾಗ) ದಿನಾಂಕ: 30.01.2021ರಲ್ಲಿ, ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ವಿವಿಧ ಇಲಾಖೆಗಳಲ್ಲಿ ಖಾಲಿ ಇದ್ದ ಪ್ರಥಮ ದರ್ಜೆ ಸಹಾಯಕ ಮತ್ತು ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ದಿನಾಂಕ 01.06.2021ರ ನಂತರ ನೇಮಕಾತಿ ಆದೇಶ ನೀಡಲು ಸಹಮತಿ ನೀಡಲಾಗಿದೆ.

ಸಂಖ್ಯೆ: ಆಇ 22 ಬಿಜಿಎಲ್ 2021

(ಬಿ. ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ